ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	633
ಮಾನ್ಯ ಸದಸ್ಯರ ಹೆಸರು	ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	17.09.2021
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	"ಕಡಿಮೆ ಜನಸಂಖ್ಯೆಯಲ್ಲಿದ್ದರೂ, ವಿಶ್ವದಲ್ಲೇ ಅತ್ಯಂತ ವಿಶಿಷ್ಟ ಹಾಗೂ ವಿಭಿನ್ನವಾದ ಸಂಸ್ಕೃತಿ, ಆಚಾರ-ವಿಚಾರ, ಸಂಪ್ರದಾಯಗಳನ್ನು ಹೊಂದಿರುವ ಹಾಗೂ ದೇಶಸೇವೆ ಮತ್ತು ಕ್ರೀಡಾಕ್ಷೇತ್ರಕ್ಕೆ ಮಹತ್ತರ ಕೊಡುಗೆ ನೀಡಿರುವ ಕೊಡವ ಜನಾಂಗಕ್ಕೆ" ಸಂಬಂಧಿಸಿದ "ಕೊಡವ ಅಭಿವೃದ್ಧಿ ನಿಗಮ" ಸ್ಥಾಪನೆ ಬಗ್ಗೆ ಸಾಕಷ್ಟು ಒತ್ತಾಯ ಹಲವಾರು ಬಾರಿ ಕೇಳಿ ಬಂದಿದ್ದರೂ, ಸದರಿ ನಿಗಮ ಸ್ಥಾಪನೆಗೆ ಸರ್ಕಾರ ಇದುವರೆಗೂ ಕ್ರಮ ವಹಿಸದಿರಲು ಕಾರಣವೇನು;	ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30.03.2002ರ ಹಿಂದುಳಿದ ವರ್ಗಗಳ ಮೀಸಲಾತಿ ಪಟ್ಟಿಯಲ್ಲಿ ಪ್ರವರ್ಗ-3(ಎ) ಕ್ರ.ಸಂ-2ರಲ್ಲಿ 'ಕೊಡಗರು' ಜಾತಿಯನ್ನು ಸೇರಿಸಲಾಗಿದೆ. 'ಕೊಡಗರು' ಸಮುದಾಯವನ್ನೂ ಒಳಗೊಂಡಂತೆ ಹಿಂದುಳಿದ ವರ್ಗಗಳ ಮೀಸಲಾತಿ ಪಟ್ಟಿಯಲ್ಲಿರುವ ಜಾತಿ/ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗಾಗಿ ಈಗಾಗಲೇ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.
ಆ)	"ಕೊಡವರ ಅಭಿವೃದ್ಧಿ ನಿಗಮ"ವನ್ನು ಪ್ರಸಕ್ತ ಆರ್ಥಿಕ ವರ್ಷದಲ್ಲೇ ಸ್ಥಾಪನೆ ಮಾಡುವ ಮೂಲಕ ಕೊಡವ ಜನಾಂಗದ ಅಭಿವೃದ್ಧಿಗೆ ಸರ್ಕಾರ ಕೂಡಲೇ ಕ್ರಮವಹಿಸುವುದೇ?	ಉದ್ಭವಿಸುವುದಿಲ್ಲ.

ಸಂಖ್ಯೆ: ಹಿಂವಕ 249 ಬಿಸಿಎ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು